**FEBRUARY 23, 2025**

**AKASHAVANI - DHARWAD**

**REGIONAL NEWS BULLETIN (KANNADA) 07.05 A.M.**

**ಮುಖ್ಯಾಂಶಗಳು**

- **ಕವಿ ಚಕ್ರವರ್ತಿ ರನ್ನರ ಕೊಡುಗೆ ಆಧುನಿಕ ಸಾಹಿತಿಗಳಿಗೆ ಪ್ರೇರಣೆ –**

**– ಸಚಿವ ಎಚ್.ಕೆ.ಪಾಟೀಲ್.**

- **ರಾಜ್ಯದ ಎಲ್ಲ ಜಿಲ್ಲಾ ಆಸ್ಪತ್ರೆಗಳಲ್ಲಿ ಡೇ–ಕೇರ್ ಕಿಮೊಥೆರಪಿ ಆರಂಭಿಸಲು ಕ್ರಮ – ಸಚಿವ ದಿನೇಶ ಗುಂಡೂರಾವ್.**
- **ಇಂದು ಬೆಳಗ್ಗೆ 11 ಗಂಟೆಗೆ ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'.**
- **ಕಲಬುರಗಿಯಲ್ಲಿ 'ನಮ್ಮ ಸರಸ್ ಮೇಳ – 2025, ನಾಳೆಯಿಂದ ಆರಂಭ.**

**ಈಗ ವಾರ್ತೆಗಳ ವಿವರ**

**ರತ್ನತ್ರಯರಾದ ಪಂಪ,** ರನ್ನ, ಪೊನ್ನರ ಕೊಡುಗೆಗಳನ್ನು ಕನ್ನಡವನ್ನು ಶ್ರೀಮಂತಗೊಳಿಸಿದ್ದು, ಅವರನ್ನು ಎಂದಿಗೂ ಮರೆಯುವಂತಿಲ್ಲ ಎಂದು ಕಾನೂನು ಸಚಿವ ಎಚ್.ಕೆ.ಪಾಟೀಲ ತಿಳಿಸಿದ್ದಾರೆ. ರನ್ನಬೆಳಗಲಿಯ ಕವಿಚಕ್ರವರ್ತಿ ರನ್ನ ವೇದಿಕೆಯಲ್ಲಿ ನಿನ್ನೆಯಿಂದ ಆರಂಭವಾಗಿ ಮೂರು ದಿನಗಳ ನಡೆಯುವ ರನ್ನ ವೈಭವಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ರನ್ನನನ್ನು ಕವಿಚಕ್ರವರ್ತಿ, ಕವಿರತ್ನ, ಕವಿರಾಜ ರತ್ನ, ಕವಿ ತಿಲಕ, ಉಭಯ ಕವಿ, ಶಕ್ತಿ ಕವಿ ಎಂದೆಲ್ಲ ಕರೆದಿದ್ದಾರೆ. ರನ್ನನಂಥ ಶ್ರೇಷ್ಠ ಕವಿಯ ಸ್ಮರಣೆಯಲ್ಲಿ ಉತ್ಸವ ನಡೆಯುತ್ತಿರುವುದು ಹೆಮ್ಮೆಯ ಸಂಗತಿ. ಆಧುನಿಕ ಸಾಹಿತಿಗಳಿಗೆ ರನ್ನ ಪ್ರೇರಣೆ ಎಂದರೆ ತಪ್ಪಾಗಲಾರದು ಎಂದರು.

**ಧ್ವನಿ– ಸಚಿವ ಎಚ್.ಕೆ.ಪಾಟೀಲ್ ( 49 ಸೆಕೆಂದುಗಳು)**

<><><>

**ನಾಡು ಕಂಡ ಶ್ರೇಷ್ಠ ಸಾಹಿತಿ,** ಜ್ಞಾನಪೀಠ ಪುರಸ್ಕೃತ ಕುವೆಂಪು ಅವರ ವಿಚಾರಧಾರೆಗಳನ್ನು ನಾವು ಬದುಕಿನಲ್ಲಿ ಅಳವಡಿಸಿಕೊಂಡರೆ ಸಮಸಮಾಜ ನಿರ್ಮಿಸಲು ಸಾಧ್ಯ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಖಾತೆ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಆಯೋಜಿಸಲಾದ 'ಕುವೆಂಪು ರಾಷ್ಟ್ರೀಯ ಪುರಸ್ಕಾರ' ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಅವರು, ಕುವೆಂಪು ಅವರ ಚಿಂತನೆ, ನಿಲುವುಗಳನ್ನು ನಾವು ಪರಿಪಾಲನೆ ಮಾಡಿದಾಗ ಮಾತ್ರ ಅವರ ಸಾಹಿತ್ಯ ನಮಗೆ ದೊರಕುತ್ತದೆ ಎಂದರು. ಕನ್ನಡ ಮತ್ತು ಸಂಸ್ಕೃತಿ ಖಾತೆ ಸಚಿವ ಶಿವರಾಜ್ ತಂಗಡಗಿ ಮಾತನಾಡಿ, ಕುಪ್ಪಳ್ಳಿಯ ಕುವೆಂಪು ಪ್ರತಿಷ್ಠಾನ, ಸಾಹಿತ್ಯ ಸೇವೆಯ ಜೊತೆಗೆ ಜನಪರ ಕೆಲಸಗಳಲ್ಲಿಯೂ ತೊಡಗಿಸಿಕೊಂಡಿದೆ ಎಂದರು. ಹಿರಿಯ ಸಾಹಿತಿ, ಬರಗೂರು ರಾಮಚಂದ್ರಪ್ಪ ಮಾತನಾಡಿ, ಸಾಮಾಜಿಕ ಕ್ರಿಯಾಶೀಲತೆಯನ್ನು ನಾಡಿಗೆ ಎತ್ತಿ ತೋರಿಸಿದವರು ಕುವೆಂಪು. ಸೌಹಾರ್ದತೆ, ಸಮಾನತೆಯ ಜೊತೆಗೆ ಒಕ್ಕೂಟ ವ್ಯವಸ್ಥೆ ಪ್ರತಿಪಾದಿಸಿದರು. ಅವರ ವಿಚಾರಧಾರೆಗಳು, ಪ್ರಾಮಾಣಿಕತೆಯಿಂದ ತುಂಬಿದ್ದವು ಎಂದು ತಿಳಿಸಿದರು.

<><><>

**ರಾಜ್ಯದ ಎಲ್ಲ ಜಿಲ್ಲಾ ಆಸ್ಪತ್ರೆಗಳಲ್ಲಿ ಡೇ–ಕೇರ್ ಕಿಮೊಥೆರಪಿ** ಆರಂಭಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ದಿನೇಶ ಗುಂಡೂರಾವ್ ತಿಳಿಸಿದ್ದಾರೆ. ವಿಜಯಪುರದ ಜಿಲ್ಲಾ ಆಸ್ಪತ್ರೆಯಲ್ಲಿ ನಿರ್ಮಿಸಲಾದ ಕಿಮೊಥೆರಪಿ ಕೇಂದ್ರ ಉದ್ಘಾಟಿಸಿ ಮಾತನಾಡಿದ ಅವರು, ಈಗಾಗಲೇ ವಿಜಯಪುರ ಹಾಗೂ ರಾಯಚೂರು ಜಿಲ್ಲೆಗಳಲ್ಲಿ ಕೇಂದ್ರ ಸ್ಥಾಪಿಸಲಾಗಿದೆ. ಕ್ಯಾನ್ಸರ್ ರೋಗಿಗಳಿಗೆ ಸ್ಥಳೀಯವಾಗಿಯೇ ಎಲ್ಲ ಚಿಕಿತ್ಸೆ ಸೌಲಭ್ಯ ಒದಗಿಸುವುದರಿಂದ ತುಂಬ ಅನುಕೂಲಕರವಾಗಲಿದೆ. ಯಾವುದೇ ರೋಗವನ್ನು ಗುಣಪಡಿಸಲು ಪ್ರಾಥಮಿಕ ಹಂತದಲ್ಲಿಯೇ ಪತ್ತೆ ಹಚ್ಚಿದಲ್ಲಿ ರೋಗವನ್ನು ಗುಣಪಡಿಸಲು ಸಹಕಾರಿಯಾಗಲಿದೆ ಎಂದು ಹೇಳಿದರು. ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಮಾತನಾಡಿ, ಆರೋಗ್ಯ ಸೇವೆ ಅತ್ಯಂತ ಮಹತ್ವದ್ದು. ಆದರೆ ಸರಕಾರಿ ಹಾಗೂ ಖಾಸಗಿ ಆಸ್ಪತ್ರೆಗಳ ನಡುವಿನ ಸಮಸ್ಯೆ ನಿವಾರಣೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ವಿವಿಧ ಯೋಜನೆಗಳನ್ನು ಪ್ರಕಟಿಸಿ, ಸಾರ್ವಜನಿಕರಿಗೆ ಗುಣಮಟ್ಟದ ಸೇವೆಗಳನ್ನು ಒದಗಿಸುತ್ತಾ ಬಂದಿವೆ. ಕುಂದು ಕೊರತೆಗಳ ನಡುವೆಯೂ ವೈದ್ಯರು ಉತ್ತಮ ಸೇವೆ ಒದಗಿಸುತ್ತಿರುವುದು ಶ್ಲಾಘನೀಯ ಎಂದರು.

<><><>

**ವಿಜಯಪುರದಲ್ಲಿ ಉಪ ಪ್ರಾದೇಶಿಕ** ವಿಜ್ಞಾನ ಕೇಂದ್ರ ಮತ್ತು ಕಿರು ತಾರಾಲಯ ಸ್ಥಾಪನೆಗೆ ರಾಜ್ಯ ಸಚಿವ ಸಂಪುಟದಲ್ಲಿ ಆಡಳಿತಾತ್ಮಕ ಅನುಮೋದನೆ ದೊರೆತಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಮಾಹಿತಿ ನೀಡಿರುವ ಅವರು, ಈ ತಾರಾಲಯದಲ್ಲಿ ಒಳಾಂಗಣ, ಹೊರಾಂಗಣ ವಿಜ್ಞಾನ ಪ್ರದರ್ಶಿಕೆಗಳು, ಆಡಿಯೋ ವ್ಯವಸ್ಥೆ, ಹವಾ ನಿಯಂತ್ರಣ ವ್ಯವಸ್ಥೆಗಳೂ ಇರಲಿದೆ ಎಂದು ಹೇಳಿದ್ದಾರೆ. ಬಬಲೇಶ್ವರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಮಮದಾಪುರದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ಡಾಕ್ಟರ್ ಬಿ.ಆರ್.ಅಂಬೇಡ್ಕರ್ ವಸತಿ ಶಾಲೆ ಮತ್ತು ವಿಜಯಪುರದಲ್ಲಿರುವ ವಸತಿ ಸಹಿತ ಪದವಿಪೂರ್ವ ಕಾಲೇಜಿಗೆ ಸ್ವಂತ ಕಟ್ಟಡಕ್ಕಾಗಿ ತಲಾ 22 ಕೋಟಿ ರೂಪಾಯಿಗಳಂತೆ ಒಟ್ಟು 44 ಕೋಟಿ ರೂಪಾಯಿ ಒದಗಿಸಲು ಸಹ ಸಂಪುಟ ಸಭೆಯಲ್ಲಿ ಅನುಮೋದನೆ ದೊರೆತಿದೆ ಎಂದು ತಿಳಿಸಿದ್ದಾರೆ.

<><><>

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.**

<><><>

**ಆಕಾಶವಾಣಿ ಸುದ್ದಿಗಳಿಗಾಗಿ, ನಮ್ಮ X ಖಾತೆ @airnews_dharwad ಹಾಗೂ**

**ನಮ್ಮ ಫೇಸ್ಬುಕ್ ಖಾತೆ Airrnu Dharwad ಅನುಸರಿಸಿ.**

<><><>

**ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್' ನಲ್ಲಿ** ಪ್ರಧಾನಮಂತ್ರಿ ನರೇಂದ್ರ ಮೋದಿ, ಇಂದು ಬೆಳಗ್ಗೆ 11 ಗಂಟೆಗೆ ದೇಶ–ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಅನಿಸಿಕೆ ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ನ 119ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆ್ಯಪ್‌ನಲ್ಲಿ ಬಿತ್ತರಗೊಳ್ಳಲಿದೆ. ಅಲ್ಲದೇ, ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರ ಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾ ಗಳಲ್ಲಿ ಪ್ರಧಾನಮಂತ್ರಿ ಅವರ ಭಾ ಣ ಪ್ರಸಾರವಾಗಲಿದೆ.

<><><>

**ಕರ್ನಾಟಕ ರಾಜ್ಯ ಜೀವನೋಪಾಯ ಅಭಿಯಾನ, ಕೌಶ್ಯಲಾಭಿವೃದ್ಧಿ** ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ವತಿಯಿಂದ, ಕಲಬುರಗಿಯಲ್ಲಿ 'ನಮ್ಮ ಸರಸ್ ಮೇಳ 2025 ಅನ್ನು ಆಯೋಜಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಮಾಹಿತಿ ನೀಡಿದ ಅವರು, ನಾಳೆಯಿಂದ ಆರಂಭವಾಗಿ ಮಾರ್ಚ್ 5 ರವರೆಗೆ ಮೇಳ ನಡೆಯಲಿದ್ದು, ದೇಶದ ವಿವಿಧ ರಾಜ್ಯಗಳ ಸುಮಾರು 2 ಸಾವಿರಕ್ಕೂ ಹೆಚ್ಚು ಸ್ವ–ಸಹಾಯ ಗುಂಪುಗಳ ಮಹಿಳೆಯರು ಪಾಲ್ಗೊಳ್ಳಲಿದ್ದಾರೆ. ಈ ಸರಸ್ ಮೇಳದಲ್ಲಿ ವೈವಿಧ್ಯಮಯ ಸೀರೆಗಳು, ಕಸೂತಿ ವಸ್ತುಗಳು, ಚನ್ನಪಟ್ಟಣದ ಗೊಂಬೆ, ಹೊರ ರಾಜ್ಯಗಳ ಆಕ ಕ ಉತ್ಪನ್ನಗಳು ಸೇರಿದಂತೆ ವಸ್ತು

ಪ್ರದರ್ಶನಗಳು ಒಳಗೊಂಡಿರಲಿವೆ. ಮಹಿಳಾ ಸ್ವಸಹಾಯ ಗುಂಪುಗಳ ಉತ್ಪನ್ನಗಳ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳಕ್ಕೆ ಆಗಮಿಸಿ, 'ನಮ್ಮ ಸರಸ್ ಮೇಳ 2025 ನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಿದ್ದಾರೆ.

<><><>

**ಜಾಂಭವಂತನ ಜಯಂತೋತ್ಸವವನ್ನು** ಆಡಳಿತ ಮಂಡಳಿಯು ವಿಶೇಷವಾಗಿ ಆಚರಣೆ ಮಾಡಿರುವುದು ಹೆಮ್ಮೆಯ ಸಂಗತಿ. ಈ ಭಾಗದ ಜನರಿಗೆ ಅನುಕೂಲವಾಗುವಂತೆ ಕಲ್ಯಾಣ ಮಂಟಪವನ್ನು ಕಟ್ಟಿಸಲು ಕ್ರಮ ವಹಿಸಲಾಗುವುದು ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ. ಕೋಲಾರ ಜಿಲ್ಲೆಯ ಮುಳಬಾಗಿಲು ತಾಲೂಕಿನ ಆವನಿಯ ಪ್ರಸಿದ್ಧ ರಾಮಲಿಂಗೇಶ್ವರ ದೇವರ ಆಧಿ ಜಾಂಭವಂತನ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸಮುದಾಯದ ಮಕ್ಕಳು ಉನ್ನತ ವ್ಯಾಸಂಗವನ್ನು ಮಾಡುವುದರೊಂದಿಗೆ ಅಭಿವೃದ್ಧಿಯಾಗಬೇಕು ಎಂದರು.

<><><>

**ಒಂದು ವಾರದಲ್ಲಿ ಗೃಹಲಕ್ಷ್ಮೀ ಯೋಜನೆಯ** ಫಲಾನುಭವಿಗಳ ಖಾತೆಗೆ ಹಣ ಜಮೆಯಾಗಲಿದೆ. ತಾಲೂಕು ಪಂಚಾಯಿತಿ ಮುಖಾಂತರ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಹಣ ಬಿಡುಗಡೆ ಮಾಡಲಾಗುವುದು ಈ ಕುರಿತು ಈಗಾಗಲೇ ಅಧಿಕಾರಿಗಳಿಗೆ ಆದೇಶ ನೀಡಿದ್ದು, ಶೀಘ್ರದಲ್ಲೇ ಹಣ ಸಂದಾಯವಾಗಲಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ.

<><><>

## ಈಗ ಸಂಕ್ಷಿಪ್ತ ಸುದ್ದಿಗಳು

**ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯ** ಗ್ರಾಮೀಣ ಪ್ರದೇಶಗಳಲ್ಲಿ ಅಭಿವೃದ್ಧಿಗೆ ಅವಕಾಶಗಳನ್ನು ನೀಡುತ್ತದೆ. ಶಿಕ್ಷಣ, ಕೃಷಿ, ಮತ್ತು ಮೂಲಭೂತ ಸೌಲಭ್ಯಗಳಲ್ಲಿ ಅನೇಕ ಮಾರ್ಗಗಳನ್ನು ಅನ್ವೇಷಿಸಲು ಪ್ರಮುಖ ಪಾತ್ರವನ್ನು ವಹಿಸುತ್ತದೆ ಎಂದು ರಾಜ್ಯ ಚುನಾವಣಾ ಆಯುಕ್ತ ಜಿ. ಎಸ್. ಸಂಗ್ರೇಶಿ ತಿಳಿಸಿದ್ದಾರೆ. ಗದಗ ಜಿಲ್ಲೆಯ ನಾಗಾವಿ ಗ್ರಾಮದಲ್ಲಿರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಆಯೋಜಿಸಲಾದ ರಾಜ್ಯಮಟ್ಟದ ಯುವಜನೋತ್ಸವ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

<><><>

**ಪ್ರಸ್ತುತ ಸರ್ಕಾರದ ಹಲವು ಯೋಜನೆಗಳ ಆರ್ಥಿಕ ನೆರವು ಪಡೆಯಲು** ಆಧಾರ್ ಸಂಖ್ಯೆ ಅಗತ್ಯವಾಗಿದೆ. ಜಿಲ್ಲೆಯಲ್ಲಿ ವಿವಿಧ ಕಾರಣಗಳಿಂದ ಆಧಾರ್ ಕಾರ್ಡ್ ಇಲ್ಲದ ಕಾರಣ ಸರಕಾರದ ಯಾವುದೇ ಯೋಜನೆಗಳಿಂದ ವಂಚಿತರಾಗದಂತೆ ತಡೆಯಲು, ಅವರ ಮನೆಗಳಿಗೆ ತೆರಳಿ ಆಧಾರ್ ಕಾರ್ಡ್ ಮಾಡಿಕೊಡುವಂತೆ ಉತ್ತರಕನ್ನಡ ಹೆಚ್ಚುವರಿ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ನಿರ್ದೇಶನ ನೀಡಿದ್ದಾರೆ.

<><><>

**ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ 2024 ರ ಏಪ್ರಿಲ್ ತಿಂಗಳಿನಿಂದ 2025 ರ** ಜನವರಿ ತಿಂಗಳವರೆಗೆ 311 ಆಹಾರ ಘಟಕಗಳ ತಪಾಸಣೆ ನಡೆಸಿ, ಆಹಾರ ಸುರಕ್ಷತೆ ಹಾಗೂ ಗುಣಮಟ್ಟ ಉಲ್ಲಂಘಿಸಿ 55 ಘಟಕಗಳಿಗೆ ನೋಟಿಸ್ ನೀಡಲಾಗಿದೆ. 27 ಘಟಕಗಳಿಗೆ ದಂಡ ವಿಧಿಸಿ 90 ಸಾವಿರ ರೂಪಾಯಿ ದಂಡ ಸಂಗ್ರಹಿಸಲಾಗಿದೆ ಎಂದು ಆಹಾರ ಸುರಕ್ಷತೆ ಹಾಗೂ ಗುಣಮಟ್ಟ ಇಲಾಖೆ ಅಂಕಿತಾಧಿಕಾರಿ ಡಾಕ್ಟರ್ ಧರ್ಮೇಂದ್ರ ತಿಳಿಸಿದ್ದಾರೆ. **ಭಾರತೀಯ ರಿಸರ್ವ್** ಬ್ಯಾಂಕ್ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ಸಹಯೋಗದಲ್ಲಿ ನಾಳೆಯಿಂದ 5 ದಿನಗಳ ಕಾಲ ಹಣಕಾಸು ಸಾಕ್ಷರತಾ ಸಪ್ತಾಹ ಆಯೋಜಿಸಲಾಗಿದೆ.

<><><>

**ಕೊಪ್ಪಳ ಜಿಲ್ಲೆಯ ತೋಟಗಾರಿಕೆ** ಇಲಾಖೆಯಿಂದ ಮಹಾಶಿವರಾತ್ರಿ ಹಬ್ಬದ ಅಂಗವಾಗಿ ರೈತರಿಂದ ನೇರವಾಗಿ ಗ್ರಾಹಕರಿಗೆ ಹಣ್ಣುಗಳನ್ನು ಕಡಿಮೆ ಬೆಲೆಗೆ ಒದಗಿಸಲು, ಹಣ್ಣು, ಜೇನು ಮತ್ತು ಅಣಬೆ ಮೇಳವನ್ನು ಆಯೋಜನೆ ಮಾಡಲಾಗಿದೆ. ಇಂದು ಮೇಳಕ್ಕೆ ಚಾಲನೆ ನೀಡಲಾಗುವುದು. ಈ ಮೇಳವು ಐದು ದಿನಗಳ ಕಾಲ ಕೊಪ್ಪಳ ನಗರದಲ್ಲಿನ ತೋಟಗಾರಿಕೆ ಇಲಾಖೆಯ ಕಚೇರಿಯ ಆವರಣದಲ್ಲಿ ನಡೆಯಲಿದೆ ಎಂದು ಕೊಪ್ಪಳ ತಾಲ್ಲೂಕಿನ ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ದುರ್ಗಾಪ್ರಸಾದ ತಿಳಿಸಿದ್ದಾರೆ.

<><><>